# ಕಂದಾಯ ಇಲಾಖೆ

## ಜಿಲ್ಲಾಧಿಕಾರಿಯವರ ಕಛೇರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

ಇಎಸ್.ಟಿ(2)ಸಿಆರ್.269/2008-09 ದಿನಾಂಕ: 30-11-2009

## ಪ್ರಕಟಣೆ

ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ ತಾಲೂಕುಗಳಲ್ಲಿ ಹಾಗೂ ತಾಲೂಕು ಕಛೇರಿಗಳಲ್ಲಿನ ಭೂಮಿ ಕೇಂದ್ರಗಳಲ್ಲಿ ಖಾಲಿಯಿರುವ 107 ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರನೇಮಕಾತಿಯಿಂದ ಭರ್ತಿ ಮಾಡುವ ಸಲುವಾಗಿ ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬೋರ್ಡಿನೇಟ್ ಬ್ರಾಂಚ್)(ಕೇಡರ್ & ರಿಕ್ರೂಟ್ ಮೆಂಟ್) ನಿಯಮಗಳು 2008 ಮತ್ತು ತಿದ್ದುಪಡಿ ನಿಯಮಗಳು 2009 ರನ್ವಯ ಹಾಗೂ ಸರಕಾರದ ಅಧಿಸೂಚನೆ ಸಂಖ್ಯೆ.ಕಂ.ಇ.299/ಬಿಎಸ್ ಸಿ/2006 ದಿನಾಂಕ:08-09-2009 ರಲ್ಲಿ ನೀಡಿರುವ ನಿರ್ದೇಶನಗಳಂತೆ online ಮುಖಾಂತರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ ದಿನಾಂಕ:26-09-2009 ಮತ್ತು ದಿನಾಂಕ:09-10-2009 ರಂದು ಅಧಿಸೂಚನೆ ಹೊರಡಿಸಲಾಗಿತ್ತು.

ಸರಕಾರವು ನೇರನೇಮಕಾತಿಯಲ್ಲಿ ಅನುಸರಿಸಬೇಕಾದ ಮೀಸಲಾತಿ ಪ್ರಮಾಣ ಮತ್ತು ಅದಕ್ಕಾಗಿ ಅನುಸರಿಸಬೇಕಾದ ವರ್ಟಿಕಲ್ ಮತ್ತು ಸಮತಳ ಮೀಸಲಾತಿ ಬಗ್ಗೆ ರೋಸ್ಟರನ್ನು ನಿಗಧಿಪಡಿಸಿ ದಿನಾಂಕ:20-06-95 ರ ಸರ್ಕಾರಿ ಆದೇಶ ಸಂ.ಸಿಆಸುಇ/08/ಸೇಹಿಮ/95 ಮತ್ತು ದಿನಾಂಕ:04-01-2008 ರ ಸರ್ಕಾರಿ ಆದೇಶ ಸಂ.ಸಿಆಸುಇ/53/ಸೇನನಿ/2007 ರಲ್ಲಿ ಆದೇಶ ಹೊರಡಿಸಿರುತ್ತದೆ.

ಸರ್ಕಾರಿ ಆದೇಶ ಸಂ.ಸಿಆಸುಇ/128/ಸೇನನಿ/2006 ದಿನಾಂಕ:01-08-2009 ರಲ್ಲಿ ಸರ್ಕಾರಿ ಸೇವೆಗಳಿಗೆ ನೇರನೇಮಕಾತಿಯಲ್ಲಿ ವಿವಿಧ ಸಮತಳ ಮೀಸಲಾತಿಗಳನ್ನು ಕಾರ್ಯಗತಗೊಳಿಸುವಾಗ ಅಂಗವಿಕಲರಿಗೆ ಪರಿಗಣಿಸಬೇಕಾದ ರೋಸ್ಟರ್ ಬಿಂದುಗಳ ಬಗ್ಗೆ ಸ್ಪಷ್ಟೀಕರಣ ನೀಡಿರುತ್ತದೆ.

ಸರ್ಕಾರದ ಅಧಿಸೂಚನೆ ಸಂ.DPAR/52/SRR/99 ದಿನಾಂಕ:29-11-2002 ರಲ್ಲಿ ಕಂದಾಯ ಇಲಾಖೆಯಲ್ಲಿ ಅಂಗವಿಕಲರಿಗೆ ನೀಡಬೇಕಾದ ಹುದ್ದೆಗಳನ್ನು ಗುರುತಿಸಿ ಆದೇಶ ಹೊರಡಿಸಿದ್ದು, ಇದರಂತೆ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕುಷ್ಠರೋಗದಿಂದ ಗುಣಮುಖರಾದ ಅಂಗವಿಕಲರು, ಶ್ರವಣದೋಷವುಳ್ಳ ಅಂಗವಿಕಲರು, ಮಾನಸಿಕ ಅಸ್ವಸ್ಥರಿಗೆ ನೀಡಲು ಗುರುತಿಸಲಾಗಿದೆ. ಅದರಂತೆ, ಚಲನವಲನ ವೈಕಲ್ಯವಿರುವವರು, ದೃಷ್ಠಿಮಾಂದ್ಯ ಮತ್ತು ಬುದ್ಧಿಮಾಂದ್ಯ ಅಂಗವಿಕಲರಿಗೆ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಗುರುತಿಸಿಲ್ಲದ ಕಾರಣ ಈ ವೈಕಲ್ಯ ಹೊಂದಿರುವವರನ್ನು ಗ್ರಾಮಲೆಕ್ಕಿಗರ ಹುದ್ದೆಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ.

ಮೇಲೆ ಹೇಳಿರುವ ಸರ್ಕಾರಿ ನಿಯಮಗಳು, ಆದೇಶಗಳು, ಅಧಿಸೂಚನೆಯಲ್ಲಿ ನೀಡಿರುವ ನಿರ್ದೇಶನಗಳನ್ವಯ ಈ ಜಿಲ್ಲೆಯಲ್ಲಿ ಖಾಲಿಯಿರುವ 107 ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿಗೊಳಿಸುವ ಬಗ್ಗೆ ಹೊರಡಿಸಲಾದ ಅಧಿಸೂಚನೆಯನ್ನು ಅನುಸರಿಸಿ ನಿಗಧಿತ ಅವಧಿಯೊಳಗೆ ಶುಲ್ಕ ಪಾವತಿಸಿ Online ಮೂಲಕ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ, 1:3 ದಾಮಾಶಯದಲ್ಲಿ (107 ಖಾಲಿ ಸ್ಥಾನಗಳಿಗೆ 321 ಅಭ್ಯರ್ಥಿಗಳು) ಅರ್ಹ ಅಭ್ಯರ್ಥಿಗಳ ಪರಿಶೀಲನಾ ಪಟ್ಟಿಯನ್ನು ಈ ಮೂಲಕ ಪ್ರಕಟಿಸಲಾಗಿದೆ. ಈ ಪಟ್ಟಿಯು ಅಭ್ಯರ್ಥಿಗಳ ಪರಿಶೀಲನಾ ಪಟ್ಟಿಯೇ ಹೊರತು ಆಯ್ಕೆ ಪಟ್ಟಿಯಾಗಿರುವುದಿಲ್ಲ. ಈ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗಿದ್ದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ನೇಮಕಾತಿಯ ಬಗ್ಗೆ ಯಾವುದೇ ಹಕ್ಕು ಸಾಧಿಸಲು ಬರುವುದಿಲ್ಲ. ಮೂಲ ದಾಖಲೆಗಳ ಪರಿಶೀಲನೆ ಸಮಯದಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸದ್ರಿ ಅಭ್ಯರ್ಥಿಗಳನ್ನು ಕೈಬಿಡಲಾಗುವುದು. ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ದಿನಾಂಕ:19-12-2009 ರಂದು ಪ್ರಕಟಿಸಲಾಗುವುದು.ಪರಿಶೀಲನಾ ಪಟ್ಟಿಯಲ್ಲಿ ಪ್ರಕಟವಾಗಿರುವ 321 ಅಭ್ಯರ್ಥಿಗಳ ಪೈಕಿ ಮೆರಿಟ್, ಮೀಸಲಾತಿ ಮತ್ತು ದಾಖಲಾತಿಗಳ ಪರಿಶೀಲನೆ ಆಧಾರದಲ್ಲಿ ಅರ್ಹ 107 ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅಂತಿಮವಾಗಿ ದಿನಾಂಕ: 19-12-2009 ರಂದು ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ಈ ಪರಿಶೀಲನಾ ಪಟ್ಟಿಯ ಬಗ್ಗೆ ಯಾರಿಗಾದರೂ ಆಕ್ಷೇಪಣೆಯಿದ್ದಲ್ಲಿ ದಿನಾಂಕ:30-11-2009 ರಿಂದ 14-12-2009 ರ ಅಪರಾಹ್ನ 4-00 ಗಂಟೆಯೊಳಗಾಗಿ ಈ ಕಚೇರಿಗೆ ಖುದ್ದಾಗಿ ಹಾಜರಾಗಿ ನಿಖರವಾದ ಆಕ್ಷೇಪಣೆಯನ್ನು ಸಂಬಂಧಿಸಿದ ಮೂಲದಾಖಲಾತಿ ಮತ್ತು ಒಂದು ದೃಢೀಕೃತ ಜೆರಾಕ್ಸ್ ಪ್ರತಿಯೊಂದಿಗೆ ಜಿಲ್ಲಾಧಿಕಾರಿ ಕಚೇರಿ ಶಿಷ್ಟಾಚಾರ ತಹಶೀಲ್ದಾರರ ಎದುರು ಹಾಜರುಪಡಿಸಬೇಕು. ನಂತರ ಬಂದ ಆಕ್ಷೇಪಣೆಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಈ ಪರಿಶೀಲನಾ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗಿರುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ಮೂಲ ದಾಖಲೆಗಳು(SSLC/P.U.C./ICSE & CBSE ಯ ಅಂಕಪಟ್ಟಿಗಳು) ಮೀಸಲಾತಿಗೆ ಸಂಬಂಧಿಸಿದ ಮೂಲ ಪ್ರಮಾಣ ಪತ್ರಗಳನ್ನು ಶುಲ್ಕ ಪಾವತಿಸಿದ ಬಗ್ಗೆ ಚಲನ್ ಸಹಿತ <u>ದಿನಾಂಕ: 15-12-2009 ರಂದು</u> <u>**ದಕ್ಷಿಣ ಕನ್ನಡ ಜಿಲ್ಲಾಧಿಕಾರಿಯವರ ಕಛೇರಿಯ 2ನೇ ಮಹಡಿಯಲ್ಲಿರುವ ಸಭಾಂಗಣದಲ್ಲಿ ಬೆಳಿಗ್ಗೆ: 10-30 ಗಂಟೆಗೆ**</u> ಪರಿಶೀಲನೆಗೆ ಹಾಜರಾಗತಕ್ಕದ್ದು ಮತ್ತು ಸಂಬಂಧಿತ ಎಲ್ಲಾ ಪ್ರಮಾಣ ಪತ್ರಗಳ, ಅಂಕಪಟ್ಟಿಗಳ ದೃಢೀಕೃತ ಜೆರಾಕ್ಸ್ ಪ್ರತಿಗಳನ್ನು ಅಭ್ಯರ್ಥಿಯ 2 ಭಾವಚಿತ್ರ ಪತ್ರಾಂಕಿತ ಅಧಿಕಾರಿಯವರಿಂದ ದೃಢೀಕರಿಸಿ, ಅಭ್ಯರ್ಥಿಯ ಭಾವಚಿತ್ರವಿರುವ ಗುರುತಿನ ಚೀಟಿಯನ್ನು ಪರಿಶೀಲನೆ ಸಮಯದಲ್ಲಿ ಒಪ್ಪಿಸಬೇಕು. **ಅಭ್ಯರ್ಥಿಯು ದಿನಾಂಕ <u>15-12-2009</u> ರಂದು ತಪ್ಪದೆ ಹಾಜರಾಗತಕ್ಕದ್ದು. ಮೂಲದಾಖಲಾತಿ, ಶುಲ್ಕ ಪಾವತಿಸಿದ ಚಲನ್,ಪ್ರಮಾಣಪತ್ರಗಳನ್ನು ದಿನಾಂಕ 15-12-2009ರಂದು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಹೆಸರನ್ನು ಅಂತಿಮ ಆಯ್ಕೆ ಪಟ್ಟಿಯಿಂದ ಕೈಬಿಡಲಾಗುವುದು.**

ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಈ ಕಚೇರಿಯ ವೆಬ್ ಸೈಟ್ <u>**http://www.dk.nic.in ಅಥವಾ**</u> <u>http://recruitment.kar.nic.in/dk-va</u> ಯಲ್ಲಿ ಪರಿಶೀಲಿಸಬಹುದು. ಅಲ್ಲದೆ ಕ್ರಮಬದ್ಧವಾಗಿ ಅರ್ಜಿ ಸಲ್ಲಿಸಿದ ಎಲ್ಲಾ ಅಭ್ಯರ್ಥಿಗಳ Rank List ನ್ನು ಸಹಾ ಈ ವೆಬ್ ಸೈಟ್ ನಲ್ಲಿ ನೋಡಬಹುದು.

ಈ ವಿಚಾರವಾಗಿ ಹೆಚ್ಚಿನ ಮಾಹಿತಿ/ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಈ ಕಚೇರಿಯ <u>**ದೂರವಾಣಿ ಸಂಖ್ಯೆ: 0824-2220584, 0824-2220590 ಮತ್ತು 0824-2220592**</u> ನ್ನು ಸಂಪರ್ಕಿಸಬಹುದು. **ಫ್ಯಾಕ್ಸ್ ಸಂಖ್ಯೆ: 0824-2220584 , ಇ-ಮೈಲ್ vasa.dk@gmail.com**

(ವಿ.ಪೊನ್ನುರಾಜ್)
ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ
ಮತ್ತು ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

1.ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2.ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3.ಪ್ರಾದೇಶಿಕ ಆಯುಕ್ತರು, ಮೈಸೂರುರವರ ಅವಗಾಹನೆಗೆ ಸಲ್ಲಿಸಿದೆ.
4.ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5.ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ದ.ಕ., ಮಂಗಳೂರು.
6.ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ, ದ.ಕ. ಮಂಗಳೂರು.
7.ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ದ.ಕ.ಮಂಗಳೂರು.
8.ಉಪನಿರ್ದೇಶಕರು, ಸೈನಿಕ ಕಲ್ಯಾಣ ಇಲಾಖೆ, ದಡ್ಡಲಕಾಡು, ಮಂಗಳೂರು.
9.ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
10.ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ/ವಿಶೇಷ ತಹಶೀಲ್ದಾರರುಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
11.ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.
12.ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.